ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 2/4/21

**ಇಂದು ವೈದ್ಯಕೀಯ ಪರೀಕ್ಷೆ ಸಾಧ್ಯತೆ ವಿಚಾರಣೆಗೆ ಎಸ್‌ಐಟಿ ಬುಲಾವ್**

# ಆರ್‌ಜೆಗೆ ಢವ ಢವ

ಸಂ.ಕ. ಸಮಾಚಾರ, ಬೆಂಗಳೂರು

ರಾಸಲೀಲೆ ಸಿಡಿ ಹಗರಣದಲ್ಲಿ ಭಾಗಿಯಾಗಿದ್ದಾಳೆ ಎನ್ನಲಾದ ಯುವತಿಯು ಈಗಾಗಲೇ ನ್ಯಾಯಾಧೀಶರ ಎದುರು ಹೇಳಿಕೆ ದಾಖಲಿಸಿದ್ದಲ್ಲದೇ ತನಿಖೆ ನಡೆಸುತ್ತಿರುವ ಎಸ್‌ಐಟಿ ಪೊಲೀಸರು ಮಹಜರು ನಡೆಸುವ ವೇಳೆ ಹಾಜರಿದ್ದು ಹೇಳಿಕೆ ನೀಡಿದ್ದಾಳೆ. ಹೀಗಾಗಿ ಇದೀಗ ಎಸ್‌ಐಟಿ ಪೊಲೀಸರು ಪ್ರಕರಣದ ಆರೋಪಿಯಾಗಿರುವ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸುತ್ತಾರಾ? ಶುಕ್ರವಾರ ಎಸ್‌ಐಟಿ ಎದುರು ವಿಚಾರಣೆಗೆ ಹಾಜರಾಗುತ್ತಾರಾ ಎಂಬ ಕುತೂಹಲ ಉಂಟಾಗಿದೆ.





ಹಗರಣದ ಸಂತ್ರಸ್ತೆ ಎನ್ನಲಾದ ಯುವತಿ ಕಬ್ಬನ್ ಪಾರ್ಕ್ ಠಾಣೆಯಲ್ಲಿ ನೀಡಿದ ದೂರಿನ ಅನ್ವಯ ಕಳೆದ ಮೂರು ದಿನಗಳಿಂದ ಯುವತಿಯನ್ನು ನ್ಯಾಯಾಧೀಶರ ಎದುರು ಹಾಜರುಪಡಿಸಿ, ಹೇಳಿಕೆ ದಾಖಲಿಸಿದ್ದಲ್ಲದೇ ಯುವತಿಯನ್ನು ಹಲವಾರು ಸುತ್ತಿನ ವಿಚಾರಣೆಗೆ ಒಳಪಡಿಸಲಾಗಿದೆ. ಯುವತಿ ಹಾಜರಾದ ಎರಡನೇ ದಿನವೂ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ, ಹೇಳಿಕೆ ದಾಖಲಿಸಿಕೊಳ್ಳಲಾಗಿದೆ. ಮೂರನೇ ದಿನವಾದ ಗುರುವಾರ ಬೆಳಗ್ಗೆ ನಾಲ್ಕು ಗಂಟೆಗಳ ಕಾಲ ಯುವತಿ ಈ ಹಿಂದೆ ವಾಸವಿದ್ದ ಆರ್‌ಟಿ ನಗರದ ಪೇಯಿಂಗ್ ಗೆಸ್ಟ್ (ಪಿಜಿ) ಕೊಠಡಿಯಲ್ಲಿ ಮಹಜರು ನಡೆಸಲಾಗಿದೆ. ಈ ವೇಳೆ ಮನೆಯಲ್ಲಿದ್ದ ವಸ್ತುಗಳ ಪರಿಶೀಲನೆ ನಡೆಸಿ, ಯುವತಿಯ ಹೇಳಿಕೆ ಪಡೆದು ವಿಡಿಯೋ ಚಿತ್ರೀಕರಣ ನಡೆಸಲಾಗಿದೆ. ಇದೇ ವೇಳೆ ಯುವತಿಯ ಮೊಬೈಲ್ ವಶಕ್ಕೆ ಪಡೆದಿರುವ ಪೊಲೀಸರು, ಮಾಜಿ ಸಚಿವರ ಜತೆ ವಿಡಿಯೋ ಕಾಲ್ ಮಾಡಲು ಬಳಸಿದ ಮೊಬೈಲ್ ಮತ್ತು ಸಿಮ್ ಕಾರ್ಡ್‌ಗಳು ಎಂಬುದನ್ನು ಖಚಿತಪಡಿಸಿಕೊಂಡೇ ವಶಕ್ಕೆ ಪಡೆದುಕೊಂಡಿದ್ದಾರೆ. ಅಲ್ಲದೇ ಯುವತಿಯು ಮಾಜಿ ಸಚಿವರನ್ನು ಭೇಟಿ ಮಾಡಲು ತೆರಳಿದ್ದಾಗ ಧರಿಸಿದ್ದ ಬಟ್ಟೆಗಳು ಕೂಡ ಕೊಠಡಿಯಲ್ಲಿ ಇದ್ದುದರಿಂದ ಅವುಗಳನ್ನೂ ವಶಕ್ಕೆ ಪಡೆದಿದ್ದಾರೆ. ಈ ವೇಳೆ ಪಿಜಿ ಮಾಲೀಕರ ವಿಚಾರಣೆ ನಡೆಸಿ, ಯುವತಿಯ ಚಲನವಲನದ ಮಾಹಿತಿ ದಾಖಲಿಸಲಾಗಿದೆ ಎನ್ನಲಾಗಿದೆ. ಇಡೀ ಮಹಜರು ಪ್ರಕ್ರಿಯೆಯನ್ನು ಯುವತಿಯಿಂದ ಲಿಖಿತ ರೂಪದ ಹೇಳಿಕೆ ದಾಖಲು ಮಾಡಿಕೊಂಡು ಸ್ಥಳೀಯ ಐವರ ಸಮಕ್ಷಮದಲ್ಲಿ ಮಹಜರು ಪ್ರತಿಗೆ ರುಜು ಹಾಕಿಸಿಕೊಳ್ಳಲಾಗಿದೆ.

ಮಧ್ಯಾಹ್ನ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರಿಗೆ ಸೇರಿದ್ದೆನ್ನಲಾದ ಮಲ್ಲೇಶ್ವರದ ಮಂತ್ರಿ ಗ್ರೀನ್ ಅಪಾರ್ಟ್‌ಮೆಂಟ್‌ಗೆ ತೆರಳಿದ ಎಸ್‌ಐಟಿ ತಂಡ ಯುವತಿಯ ಸಮಕ್ಷಮದಲ್ಲೇ ಅಪಾರ್ಟ್‌ಮೆಂಟ್‌ನ 17ನೇ ಮಹಡಿಯ ಸಿ ಬ್ಲಾಕ್‌ನ ಮನೆಯಲ್ಲಿ ಮಹಜರು ನಡೆಸಿದೆ. ಈ ವೇಳೆ ಮನೆಯಲ್ಲಿ ಪತ್ತೆಯಾದ ಕೂದಲು, ರಕ್ತ ಮಾದರಿ, ಹಾಸಿಗೆ, ದಿಂಬಿನ ಕವರ್ ಮತ್ತಿತರ ವಸ್ತುಗಳನ್ನು ಹೆಚ್ಚಿನ ತಪಾಸಣೆಗಾಗಿ ಸಂಗ್ರಹಿಸಲಾಗಿದೆ. ಈ ವೇಳೆ ಅಪಾರ್ಟ್‌ಮೆಂಟ್ ನಿವಾಸಿಗಳಿಂದಲೂ ಹೇಳಿಕೆ ದಾಖಲಿಸಲಾಗಿದೆ. ಅಪಾರ್ಟ್‌ಮೆಂಟ್‌ನ ಎಂಟ್ರಿ-ಎಕ್ಸಿಟ್‌ನ ವಿಡಿಯೋ ಫೂಟೇಜ್‌ಗಳನ್ನು ಕೂಡ ಎಸ್‌ಐಟಿ ಪಡೆದುಕೊಂಡಿದೆ.

ಹಗರಣದ ಆರೋಪಿ ರಮೇಶ್ ಜಾರಕಿಹೊಳಿ ಅವರಿಗೆ ಶುಕ್ರವಾರ ವಿಚಾರಣೆಗೆ ಬರುವಂತೆ ಕಳೆದ ಭಾನುವಾರವೇ ಎಸ್‌ಐಟಿ ಪೊಲೀಸರು ನೋಟಿಸ್ ನೀಡಿದ್ದರು. ಭಾನುವಾರ ದಿನವಿಡೀ ವಿಚಾರಣೆಗೆ ಒಳಗಾಗಿದ್ದ ಮಾಜಿ ಸಚಿವರು, ಸೋಮವಾರ ವಿಚಾರಣೆಗೆ ಕರೆದರೂ ನಾಲ್ಕು ದಿನಗಳ ಕಾಲಾವಕಾಶ ಕೋರಿದ್ದರು. ಈ ಹಿನ್ನೆಲೆಯಲ್ಲಿ ಶುಕ್ರವಾರ ವಿಚಾರಣೆಗೆ ಹಾಜರಾದರೆ, ಯುವತಿ ಹೇಳಿಕೆ ಆಧಾರದ ಮೇಲೆ ಜಾರಕಿಹೊಳಿ ಅವರ ವೈದ್ಯಕೀಯ ಪರೀಕ್ಷೆ ನಡೆಸುವ ಸಾಧ್ಯತೆಗಳಿವೆ. ಅಲ್ಲದೇ ಬಂಧನದ ಸಾಧ್ಯತೆಯನ್ನೂ ತಳ್ಳಿಹಾಕುವಂತಿಲ್ಲ. ಯುವತಿಯು ಹೇಳಿಕೆ ದಾಖಲಿಸಿದ ಬಳಿಕ ಜಾರಕಿಹೊಳಿ ಎಲ್ಲಿದ್ದಾರೆ ಎಂಬ ಬಗ್ಗೆ ಯಾರಿಗೂ ಸರಿಯಾದ ಮಾಹಿತಿ ಇಲ್ಲ.